**ಕರ್ನಾಟಕ ಸರ್ಕಾರ**

ಸಂಖ್ಯೆ: ನಅಇ 90 ಜಿಇಎಲ್ 2021(ಭಾ)

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 21/06/2021.

**ಸುತ್ತೋಲೆ**

ವಿಷಯ:- ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪಾವತಿಸಲಾಗುವ ಆಸ್ತಿ ತೆರಿಗೆ ಮೇಲಿನ ಶೇ.5ರ ರಿಯಾಯಿತಿಯ ಹಾಗೂ ವಿಳಂಬದ ಅವಧಿಗೆ ವಿಧಿಸಲಾಗುವ ದಂಡದ ಕಾಲಾವಧಿಯನ್ನು ಸೆಪ್ಟೆಂಬರ್ 2021ರ ಅಂತ್ಯದವರೆಗೆ ವಿಸ್ತರಿಸುವ ಬಗ್ಗೆ.

ಉಲ್ಲೇಖ:- ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 90 ಜಿಇಎಲ್ 2021, ದಿನಾಂಕ:05.05.2021.

******

ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 90 ಜಿಇಎಲ್ 2021 ದಿನಾಂಕ: 05-05-2021ರಲ್ಲಿ 2021-22ನೇ ಸಾಲಿನಲ್ಲಿ ಕೋವಿಡ್-19 ಸಂಕ್ರಾಮಿಕ ರೋಗದ ನಿಯಂತ್ರಣ ಸಂಬಂಧ ವಿಧಿಸಲಾಗಿದ್ದ ಲಾಕ್ ಡೌನ್ ಹಿನ್ನೆಲೆಯಲ್ಲಿ ಸಾರ್ವಜನಿಕರು ಸಾಮಾಜಿಕ ಅಂತರ ಮತ್ತು ಪ್ರತ್ಯೇಕತೆಗೆ ಹೆಚ್ಚಿನ ಗಮನ ಹರಿಸುವ ದೃಷ್ಟಿಯಿಂದ ನಗರ ಸ್ಥಳೀಯ ಸಂಸ್ಥೆಗಳು 2021-22 ನೇ ಸಾಲಿನ ಆರ್ಥಿಕ ವರ್ಷದ ಏಪ್ರಿಲ್ ತಿಂಗಳಲ್ಲಿ ಆಸ್ತಿ ತೆರಿಗೆ ಪಾವತಿಗೆ ನೀಡಲಾಗುತ್ತಿರುವ ಶೇ.5ರ ರಿಯಾಯತಿಯ ಕಾಲಾವಧಿಯನ್ನು (ಬಿಬಿಎಂಪಿ ಹೊರತುಪಡಿಸಿ) ದಿನಾಂಕ: 30.06.2021 ವರೆಗೆ ವಿಸ್ತರಿಸಲಾಗಿರುತ್ತದೆ.

ಮುಂದುವರೆದು, ಪ್ರಸ್ತುತ ಕೋವಿಡ್-19ರ ಸಾಂಕ್ರಾಮಿಕ ರೋಗದ ಎರಡನೇ ಅಲೆಯು ಅತಿ ತೀವ್ರವಾಗಿ ಹರಡುತ್ತಿರುವುದರಿಂದ ಹಾಗೂ ನಿಯಂತ್ರಣಕ್ಕೆ ಬಾರದ ಹಿನ್ನೆಲೆಯಲ್ಲಿ ಸರ್ಕಾರವು ಅಗತ್ಯ ಸೇವೆಗಳನ್ನು ಹೊರತುಪಡಿಸಿ ಉಳಿದ ವ್ಯಾಪಾರ ವಹಿವಾಟುಗಳನ್ನು ದಿನಾಂಕ: 14.06.2021 ರವರೆಗೆ ಸ್ಥಗಿತಗೊಳಿಸಲಾಗಿದ್ದು, ಸಾರ್ವಜನಿಕರ ಆರೋಗ್ಯ ಮತ್ತು ಆರ್ಥಿಕ ಹಿತದೃಷ್ಟಿಯಿಂದ ನಗರ ಸ್ಥಳೀಯ ಸಂಸ್ಥೆಗಳು 2021-22ನೇ ಸಾಲಿನ ಆರ್ಥಿಕ ವರ್ಷದ ಆಸ್ತಿ ತೆರಿಗೆ ಪಾವತಿಗೆ ನೀಡಲಾಗುತ್ತಿರುವ ಶೇ.5ರ ರಿಯಾಯತಿಯ ಕಾಲಾವಧಿಯನ್ನು ದಿನಾಂಕ 30-06-2021 ವರೆಗೆ ಈಗಾಗಲೇ ವಿಸ್ತರಿಸಿರುವುದನ್ನು ದಿನಾಂಕ:31.07.2021 ರವರೆಗೆ ವಿಸ್ತರಿಸಿದೆ ಮತ್ತು ಆಸ್ತಿ ತೆರಿಗೆಯನ್ನು ಪಾವತಿಸದಿದ್ದಲ್ಲಿ ಜುಲೈ ತಿಂಗಳಿನಿಂದ ವಿಳಂಭದ ಅವಧಿಗೆ ವಿಧಿಸಲಾಗುವ ಮಾಸಿಕ ಶೇ 2ರಷ್ಟು ದಂಡದ ಕಾಲಾವಧಿಯನ್ನು 01.07.2021 ರಿಂದ ಅನ್ವಯಿಸುವ ಬದಲಾಗಿ ದಿನಾಂಕ: 01.08.2021 ರಿಂದ ಅನ್ವಯಿಸುವುದು. ಈ ಕುರಿತು ಅಗತ್ಯ ಕ್ರಮ ಕೈಗೊಳ್ಳುವಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು/ಮಹಾನಗರ ಪಾಲಿಕೆಗಳಿಗೆ (ಬಿಬಿಎಂಪಿ ಹೊರತುಪಡಿಸಿ) ಸೂಚಿಸಿದೆ.

A. Vijayakumar
21-06-2021
(ಎ. ವಿಜಯಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
(ಪೌರಾಡಳಿತ-2 ಮತ್ತು ಮಂಡಳಿ)
ನಗರಾಭಿವೃದ್ಧಿ ಇಲಾಖೆ.

21/6

**ಇವರಿಗೆ:**

1. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ.ಗೋಪುರ, ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
3. ರಾಜ್ಯದ ಎಲ್ಲಾ ಜಿಲ್ಲೆಯ ಯೋಜನಾ ನಿರ್ದೇಶಕರುಗಳು, ಜಿಲ್ಲಾ ನಗರಾಭಿವೃದ್ಧಿಕೋಶ.
4. ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳ (ಬಿಬಿಎಂಪಿ ಹೊರತುಪಡಿಸಿ)/ ನಗರಸಭೆಗಳ/ ಪುರಸಭೆಗಳ / ಪಟ್ಟಣ ಪಂಚಾಯತಿಗಳ ಆಯುಕ್ತರು/ ಪೌರಾಯುಕ್ತರು/ ಮುಖ್ಯಾಧಿಕಾರಿಗಳು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Scanned with CamScanner